**All India Radio: Bangalore**
**National Bulletin In Kannada**
**17.06.2026 19.35 hrs**
**ಆಕಾಶವಾಣಿ, ಬೆಂಗಳೂರು**

**ರಾಷ್ಟ್ರೀಯ ವಾರ್ತೆಗಳು**

ಮುಖ್ಯಾಂಶಗಳು

೧. ಜಿ೭ ಶೃಂಗಸಭೆಯಲ್ಲಿ ಸಮತೋಲಿತ, ಸುಸ್ಥಿರ ಆರ್ಥಿಕ ಬೆಳವಣಿಗೆ ಕುರಿತು ಪ್ರಧಾನಿ ನರೇಂದ್ರ ಮೋದಿ ಭಾಷಣ

೨. ಫ್ರಾನ್ಸ್‌ನ ಏವಿಯನ್‌ನಲ್ಲಿಂದು ಪ್ರಧಾನಿ ನರೇಂದ್ರ ಮೋದಿ - ಅಮೆರಿಕ ಅಧ್ಯಕ್ಷ ಡೊನಾಲ್ಡ್ ಟ್ರಂಪ್ ನಡುವೆ ಮಹತ್ವದ ದ್ವಿಪಕ್ಷೀಯ ಮಾತುಕತೆ

೩. ರಕ್ಷಣಾ ವಲಯದಲ್ಲಿ ಆತ್ಮನಿರ್ಭರತೆಗೆ ಒತ್ತು; ಸಶಸ್ತ್ರ ಪಡೆಗಳ ಆಧುನೀಕರಣ - ರಕ್ಷಣಾ ಸಚಿವ ರಾಜನಾಥ್ ಸಿಂಗ್

೪. ಮುಂದಿನ ಕೆಲ ವರ್ಷಗಳಲ್ಲಿ ಭಾರತ, ವಿಶ್ವದ ಎರಡನೇ ಅತಿದೊಡ್ಡ ವಿದ್ಯುನ್ಮಾನ ರಫ್ತುದಾರ ರಾಷ್ಟ್ರವಾಗುವ ಗುರಿ - ಕೇಂದ್ರ ಸಚಿವ ಅಶ್ವಿನಿ ವೈಷ್ಣವ್

---

ಫ್ರಾನ್ಸ್‌ನ ಏವಿಯನ್‌ನಲ್ಲಿ ನಡೆಯುತ್ತಿರುವ ಜಿ-೭ ಶೃಂಗಸಭೆಯಲ್ಲಿ "ಎಲ್ಲರ ಪ್ರಯೋಜನಕ್ಕಾಗಿ ಸಮತೋಲಿತ, ಸಮಗ್ರ ಮತ್ತು ಸುಸ್ಥಿರ ಆರ್ಥಿಕ ಬೆಳವಣಿಗೆಯನ್ನು ಉತ್ತೇಜಿಸುವುದು" ಎಂಬ ವಿಷಯ ಕುರಿತ ಕಾರ್ಯಕಾರಿ ಅಧಿವೇಶನವನ್ನು ಉದ್ದೇಶಿಸಿ ಪ್ರಧಾನಿ ನರೇಂದ್ರ ಮೋದಿ ಇಂದು ಮಾತನಾಡಿದರು.

ಅಭಿವೃದ್ಧಿಶೀಲ ರಾಷ್ಟ್ರಗಳಿಗೆ ಆರ್ಥಿಕ ಸ್ಥಿತಿಸ್ಥಾಪಕತ್ವವನ್ನು ನೀಡುವ ಕಾರ್ಯವಿಧಾನಗಳನ್ನು ಅಭಿವೃದ್ಧಿಪಡಿಸಲು ಅಂತರರಾಷ್ಟ್ರೀಯ ಹಣಕಾಸು ಸಂಸ್ಥೆಗಳ ಅಗತ್ಯವನ್ನು ಪ್ರಧಾನಿ ತಮ್ಮ ಭಾಷಣದಲ್ಲಿ ಪ್ರತಿಪಾದಿಸಿದ್ದಾರೆ, ಆಫ್ರಿಕಾ, ದಕ್ಷಿಣ ಅಮೆರಿಕ ಮತ್ತು ಪೆಸಿಫಿಕ್ ದ್ವೀಪ ದೇಶಗಳನ್ನು ಸಂಪರ್ಕಿಸುವ ಸಂಪರ್ಕ ಯೋಜನೆಗಳನ್ನು ಸಹ ಅವರು ಪ್ರಸ್ತಾಪಿಸಿದರು.

ಜಿ-೭ ರ ಬಂಡವಾಳ, ಭಾರತದ ಪ್ರತಿಭೆ ಮತ್ತು ಜಾಗತಿಕ ದಕ್ಷಿಣದ ಮಾಲೀಕತ್ವವನ್ನು ಸಂಯೋಜಿಸಬಹುದಾದ ಸಂಪರ್ಕ ಮತ್ತು ವಾಣಿಜ್ಯ ವಹಿವಾಟು ವೇಗಗೊಳಿಸಲು ಅಂತಾರಾಷ್ಟ್ರೀಯ ಪಾಲುದಾರಿಕೆ ರಚಿಸುವಂತೆಯೂ ಅವರು ಸೂಚಿಸಿದ್ದಾರೆ.

ಸ್ಪಷ್ಟವಾದ ಬೆಳವಣಿಗೆಯು ಜನರ ಒಳಗೊಳ್ಳುವಿಕೆ ಮತ್ತು ಯೋಗಕ್ಷೇಮಕ್ಕೆ ಕಾರಣವಾಗುತ್ತದೆ. "ಸಬ್ ಕಾ ಸಾಥ್, ಸಬ್ ಕಾ ವಿಕಾಸ್, ಸಬ್ ಕಾ ವಿಶ್ವಾಸ್, ಸಬ್ ಕಾ ಪ್ರಯಾಸ್" ನಿಂದ ನೊಂದಿಗೆ ಭಾರತ ಭಾರತದ ಬೆಳವಣಿಗೆ ಕಾಣುತ್ತಿದೆ ಎಂದು ಪ್ರಧಾನಿ ಹೇಳಿದ್ದಾರೆ.

ಉನ್ನತ ಮಟ್ಟದ ಅಧಿವೇಶನದಲ್ಲಿ ಜಿ-೭ ಸದಸ್ಯ ರಾಷ್ಟ್ರಗಳು, ಪಾಲುದಾರ ರಾಷ್ಟ್ರಗಳು ಮತ್ತು ಅಂತಾರಾಷ್ಟ್ರೀಯ ವಿತ್ತೀಯ ನಿಧಿಯ ಪ್ರಮುಖ ಪ್ರತಿನಿಧಿಗಳು ಭಾಗವಹಿಸಿದ್ದರು. ಇಂದು ನಡೆಯಲಿರುವ ಪ್ರಧಾನ ಮಂತ್ರಿಯವರ ಬಹುನಿರೀಕ್ಷಿತ ಅಮೆರಿಕ ಅಧ್ಯಕ್ಷ ಡೊನಾಲ್ಡ್ ಟ್ರಂಪ್ ಅವರೊಂದಿಗಿನ ದ್ವಿಪಕ್ಷೀಯ ಸಭೆಯ ಮೇಲೆ ಜಾಗತಿಕ ದೃಷ್ಟಿ ಕೇಂದ್ರೀಕೃತವಾಗಿದೆ.

---

ಜಿ-೭ ರಾಷ್ಟ್ರಗಳ ನಾಯಕರು ಜಾಗತಿಕ ಸ್ಥಿರತೆ, ಭದ್ರತಾ ಸಹಕಾರ ಹಾಗೂ ಗಡಿಗಳ ಮೂಲಕ ನಡೆಯುವ ಸಂಘಟಿತ ಅಪರಾಧ ನಿಯಂತ್ರಣಕ್ಕೆ ಸಂಬಂಧಿಸಿದ ಹಲವು ನಿರ್ಣಯಗಳನ್ನು ಅಂಗೀಕರಿಸಿದ್ದಾರೆ.

ಅಮೆರಿಕ ಅಧ್ಯಕ್ಷ ಡೊನಾಲ್ಡ್ ಟ್ರಂಪ್ ಅವರ ನೇತೃತ್ವದಲ್ಲಿ ಅಮೆರಿಕ ಮತ್ತು ಇರಾನ್ ನಡುವಿನ ಒಪ್ಪಂದವನ್ನು ಜಿ೭ ರಾಷ್ಟ್ರಗಳ ನಾಯಕರು ಸ್ವಾಗತಿಸಿದ್ದು, ಈ ಒಪ್ಪಂದವು ಪ್ರಾದೇಶಿಕ ಉದ್ವಿಗ್ನತೆಯನ್ನು ತಗ್ಗಿಸಲು ಹಾಗೂ ಇರಾನ್ ಪರಮಾಣು ಶಸ್ತ್ರಾಸ್ತ್ರ ಹೊಂದುವುದನ್ನು ತಡೆಯಲು ಒಂದು ಅವಕಾಶವಾಗಿದೆ ಎಂದು ಅಭಿಪ್ರಾಯಪಟ್ಟಿದ್ದಾರೆ. ಹೋರ್ಮುಜ್ ಜಲಸಂಧಿಯ ಮೂಲಕ ಸುರಕ್ಷಿತ ಸಮುದ್ರ ಸಂಚಾರದ ಮಹತ್ವವನ್ನೂ ಪ್ರತಿಪಾದಿಸಿರುವ ನಾಯಕರು, ಪ್ರಾದೇಶಿಕ ಭದ್ರತೆಯನ್ನು ಬಲಪಡಿಸುವ ಕ್ರಮಗಳಿಗೆ ಬೆಂಬಲ ವ್ಯಕ್ತಪಡಿಸಿದ್ದಾರೆ.

ಮತ್ತೊಂದು ನಿರ್ಣಯದಲ್ಲಿ, ಮಾದಕವಸ್ತು ಕಳ್ಳಸಾಗಣೆಯ ವಿರುದ್ಧದ ಕ್ರಮಗಳನ್ನು ಮತ್ತಷ್ಟು ತೀವ್ರಗೊಳಿಸುವುದಾಗಿ ಜಿ-೭ ರಾಷ್ಟ್ರಗಳು ಸಂಕಲ್ಪ ಮಾಡಿವೆ. ರಾಷ್ಟ್ರೀಯ ಭದ್ರತೆ, ಸಾರ್ವಜನಿಕ ಆರೋಗ್ಯ ಹಾಗೂ ಆರ್ಥಿಕ ಸ್ಥಿರತೆಗೆ ಮಾದಕವಸ್ತು ಕಳ್ಳಸಾಗಣೆ ಬೆದರಿಕೆಯಾಗಿದೆ. ಪಾಲುದಾರ ರಾಷ್ಟ್ರಗಳಾದ ಬ್ರೆಜಿಲ್ ಮತ್ತು ದಕ್ಷಿಣ ಕೊರಿಯಾ ಕೂಡ ಈ ಉಪಕ್ರಮಕ್ಕೆ ಬೆಂಬಲ ಸೂಚಿಸಿವೆ. ಮಾದಕವಸ್ತು ಜಾಲಗಳು ದಿನದಿಂದ ದಿನಕ್ಕೆ ಹೆಚ್ಚು ಸಂಘಟಿತ ಹಾಗೂ ತಾಂತ್ರಿಕವಾಗಿ ಸುಧಾರಿಸುತ್ತಿರುವುದು ಅಪಾಯಕಾರಿ ಬೆಳವಣಿಗೆಯಾಗಿದೆ. ಭ್ರಷ್ಟಾಚಾರ, ಹಿಂಸಾಚಾರ ಹಾಗೂ ಹಣ ಅಕ್ರಮ ಹರಿವಿಗೆ ಇವು ಕಾರಣವಾಗುತ್ತಿವೆ. ಇದನ್ನು ತಡೆಗಟ್ಟಲು ಪೂರೈಕೆ ಮತ್ತು ಬೇಡಿಕೆ ಎರಡನ್ನೂ ಗುರಿಯಾಗಿಸಿಕೊಂಡ ಸಾಕ್ಷ್ಯಾಧಾರಿತ ಹಾಗೂ ಸಮನ್ವಯಿತ ಕಾರ್ಯತಂತ್ರವನ್ನು ಅನುಸರಿಸಲು ನಾಯಕರು ಒಪ್ಪಿಗೆ ಸೂಚಿಸಿದ್ದಾರೆ.

---

ಫ್ರಾನ್ಸ್‌ನ ಎವಿಯನ್‌ನಲ್ಲಿ ನಡೆಯುತ್ತಿರುವ ಜಿ೭ ಶೃಂಗಸಭೆಯ ಸಂದರ್ಭದಲ್ಲಿ ಪ್ರಧಾನಿ ನರೇಂದ್ರ ಮೋದಿ ಅವರು ಜರ್ಮನ್ ಚಾನ್ಸೆಲರ್ ಫ್ರೆಡ್ರಿಕ್ ಮೆರ್ಜ್ ಅವರೊಂದಿಗೆ ಮಹತ್ವದ ದ್ವಿಪಕ್ಷೀಯ ಸಭೆ ನಡೆಸಿದರು. ಈ ಕುರಿತಂತೆ ಸಾಮಾಜಿಕ ಮಾಧ್ಯಮದಲ್ಲಿ ಪೋಸ್ಟ್ ಮಾಡಿರುವ ಪ್ರಧಾನಿ ಅವರು, ಜರ್ಮನ್ ಚಾನ್ಸೆಲರ್ ಅವರೊಂದಿಗಿನ ಮಾತುಕತೆ ತುಂಬಾ ಫಲಪ್ರದವಾಗಿದೆ. ವ್ಯಾಪಾರ, ಹೂಡಿಕೆಗಳು, ಆರ್ಥಿಕತೆ, ರಕ್ಷಣೆ, ಐಟಿ ಮತ್ತು ಇತರ ಕ್ಷೇತ್ರಗಳಲ್ಲಿ ಒಟ್ಟಾಗಿ ಕೆಲಸ ಮಾಡುವ ಮೂಲಕ ದ್ವಿಪಕ್ಷೀಯ ಸಹಕಾರವನ್ನು ಮತ್ತಷ್ಟು ಗಟ್ಟಿಗೊಳಿಸುವ ಮಾರ್ಗಗಳನ್ನು ಚರ್ಚಿಸಲಾಗಿದೆ. ಅಲ್ಲದೇ, ಎರಡೂ ರಾಷ್ಟ್ರಗಳ ನಡುವಿನ ಸಾಂಸ್ಕೃತಿಕ ಸಂಪರ್ಕಗಳನ್ನು ಹೆಚ್ಚಿಸುವ ಬಗ್ಗೆ ಚರ್ಚಿಸಲಾಯಿತು ಎಂದು ಅವರು ತಿಳಿಸಿದ್ದಾರೆ.

---

ಕೇಂದ್ರ ವಾಣಿಜ್ಯ ಮತ್ತು ಕೈಗಾರಿಕಾ ಸಚಿವ ಪಿಯೂಷ್ ಗೋಯಲ್ ಅವರು ಫ್ರಾನ್ಸ್‌ನ ನೀಸ್‌ನಲ್ಲಿ ಮೊನಾಕೊದ ರಾಜ ಆಲ್ಬರ್ಟ್ ಅವರೊಂದಿಗೆ ದೂರವಾಣಿ ಮೂಲಕ ಮಾತುಕತೆ ನಡೆಸಿದ್ದಾರೆ. ಸಾಮಾಜಿಕ ಮಾಧ್ಯಮ ಪೋಸ್ಟ್‌ನಲ್ಲಿ ಈ ಕುರಿತು ಪೋಸ್ಟ್ ಮಾಡಿರುವ ಪಿಯೂಷ್ ಗೋಯಲ್ ಅವರು, ಸುಸ್ಥಿರತೆ, ಸಾಗರ ಆರ್ಥಿಕತೆ, ನಾವೀನ್ಯತೆ ಮತ್ತು ಉದಯೋನ್ಮುಖ ತಂತ್ರಜ್ಞಾನಗಳಂತಹ ಕ್ಷೇತ್ರಗಳಲ್ಲಿ ಭಾರತ-ಮೊನಾಕೊ ಪಾಲುದಾರಿಕೆಯನ್ನು ವಿಸ್ತರಿಸುವ ಬಗ್ಗೆ ಚರ್ಚಿಸಲಾಯಿತು ಎಂದು ತಿಳಿಸಿದ್ದಾರೆ.

ಫ್ರಾನ್ಸ್‌ನ ನೀಸ್‌ನಲ್ಲಿ ನಿನ್ನೆ ಮುಕ್ತಾಯಗೊಂಡ ಭಾರತದ ಪ್ರಮುಖ 'ಭಾರತ್ ಇನ್ನೋವೇಟ್ಸ್ ೨೦೨೬ ಕಾರ್ಯಕ್ರಮದ ಬಗ್ಗೆ ರಾಜ ಆಲ್ಬರ್ಟ್ ಅವರಿಗೆ ವಿವರಿಸಲಾಯಿತು. ಈ ಕಾರ್ಯಕ್ರಮ ಭಾರತದ ತಂತ್ರಜ್ಞಾನ ಮತ್ತು ನಾವೀನ್ಯತೆ ಪರಿಸರ ವ್ಯವಸ್ಥೆಯನ್ನು ಪ್ರದರ್ಶಿಸಲಿದ್ದು, ಜಾಗತಿಕ ಸಹಯೋಗವನ್ನು ಬಲಪಡಿಸಲಿದೆ. ಭಾರತ-ಮೊನಾಕೊ ಸಂಬಂಧಗಳು ಮುಂದಿನ ವರ್ಷಗಳಲ್ಲಿ ಹೊಸ ಎತ್ತರವನ್ನು ಮುಟ್ಟಲಿವೆ ಎಂದು ಪಿಯೂಷ್ ಗೋಯಲ್ ವಿಶ್ವಾಸ ವ್ಯಕ್ತಪಡಿಸಿದ್ದಾರೆ.

---

ಕಳೆದ ದಶಕದಲ್ಲಿ ಭಾರತದ ರಕ್ಷಣಾ ಸಾಮರ್ಥ್ಯಗಳು ಸ್ವಾವಲಂಬನೆಯ ದೃಷ್ಟಿಕೋನದಿಂದ ಮಾರ್ಗದರ್ಶಿಸಲ್ಪಟ್ಟು ನಾವೀನ್ಯತೆ, ತಂತ್ರಜ್ಞಾನ ಮತ್ತು ಸ್ಥಳೀಯ ಉತ್ಪಾದನೆಯಿಂದ ಗಮನಾರ್ಹ ಪರಿವರ್ತನೆಯನ್ನು ಕಂಡಿವೆ ಎಂದು ಪ್ರಧಾನಿ ನರೇಂದ್ರ ಮೋದಿ ಪ್ರತಿಪಾದಿಸಿದ್ದಾರೆ.

ಸಾಮಾಜಿಕ ಮಾಧ್ಯಮದಲ್ಲಿ ಈ ಕುರಿತು ಮಾಹಿತಿ ಹಂಚಿಕೊಂಡಿರುವ ಪ್ರಧಾನಿಯವರು ವಾಯು, ಭೂಮಿ ಮತ್ತು ಸಮುದ್ರದಾದ್ಯಂತ ದೇಶ ತನ್ನ ರಕ್ಷಣಾ ಸಾಮರ್ಥ್ಯಗಳನ್ನು ಹೇಗೆ ಬಲಪಡಿಸಿದೆ ಹಾಗೂ ಸುಧಾರಿತ ಸ್ಥಳೀಯ ತಂತ್ರಜ್ಞಾನಗಳು ಮತ್ತು ಸ್ವಾವಲಂಬನೆ ಮತ್ತು ರಾಷ್ಟ್ರೀಯ ಭದ್ರತೆಗೆ ಬಲವಾದ ಅಡಿಪಾಯವನ್ನು ಹೇಗೆ ನಿರ್ಮಿಸಿದೆ ಎಂಬುದನ್ನು ವಿವರಿಸಿದ್ದಾರೆ. ಇದು ಕಳೆದ ೧೨ ವರ್ಷಗಳಲ್ಲಿ ಭಾರತ ರಕ್ಷಣಾ ಕ್ಷೇತ್ರದಲ್ಲಿ ಮಾಡಿರುವ ಪ್ರಗತಿಯ ಒಂದು ನೋಟವನ್ನು ನೀಡುತ್ತದೆ ಎಂದು ಅವರು ಹೇಳಿದ್ದಾರೆ.

---

ಭಯೋತ್ಪಾದನೆಯ ವಿರುದ್ಧ ಶೂನ್ಯ ಸಹಿಷ್ಣುತೆಯ ನೀತಿಯಿಂದ ಹಿಡಿದು ನಿರ್ದಿಷ್ಟ ದಾಳಿ, ಬಾಲಕೋಟ್ ಮತ್ತು ಆಪರೇಷನ್ ಸಿಂಧೂರ್‌ನಂತಹ ನಿರ್ಣಾಯಕ ಕ್ರಮಗಳವರೆಗೆ, ತನ್ನ ಸಾರ್ವಭೌಮತ್ವ ವಿಷಯದಲ್ಲಿ ರಾಜಿ ಮಾಡಿಕೊಳ್ಳುವುದಿಲ್ಲ ಎಂಬ ಸ್ಪಷ್ಟ ಸಂದೇಶವನ್ನು ಭಾರತ ರವಾನಿಸಿದೆ ಎಂದು ರಕ್ಷಣಾ ಸಚಿವ ರಾಜನಾಥ್ ಸಿಂಗ್ ಹೇಳಿದ್ದಾರೆ.

ಸಾಮಾಜಿಕ ಮಾಧ್ಯಮ ಪೋಸ್ಟ್‌ನಲ್ಲಿ ಈ ವಿಷಯ ತಿಳಿಸಿರುವ ಅವರು, ಪ್ರಧಾನಿ ನರೇಂದ್ರ ಮೋದಿ ಅವರ ನಾಯಕತ್ವದಲ್ಲಿ ಭಾರತ ತನ್ನ ರಾಷ್ಟ್ರೀಯ ರಕ್ಷಣಾ ವಲಯದಲ್ಲಿ ಐತಿಹಾಸಿಕ ರೂಪಾಂತರವನ್ನು ಕಂಡಿದೆ. ರಕ್ಷಣಾ ಕ್ಷೇತ್ರದಲ್ಲಿ ಆತ್ಮನಿರ್ಭರತೆಗಾಗಿ ದೇಶೀಯ ಸಾಮರ್ಥ್ಯಗಳು ಬಲಗೊಂಡಿದ್ದು, ಸಶಸ್ತ್ರ ಪಡೆಗಳು ಆಧುನೀಕರಣಗೊಂಡಿವೆ. ಅಲ್ಲದೇ, ಭೂಮಿ, ಸಮುದ್ರ, ವಾಯು, ಸೈಬರ್ ಮತ್ತು ಬಾಹ್ಯಾಕಾಶ ಕ್ಷೇತ್ರಗಳಲ್ಲಿ ಸನ್ನದ್ಧತೆಯನ್ನು ಹೆಚ್ಚಿಸಿದೆ ಎಂದು ಹೇಳಿದ್ದಾರೆ.

ಕಳೆದ ೧೨ ವರ್ಷಗಳ ಪಯಣವು ಬಲಿಷ್ಠ, ಸುರಕ್ಷಿತ, ಸ್ವಾವಲಂಬಿ ಮತ್ತು ಹೆಚ್ಚು ಆತ್ಮವಿಶ್ವಾಸದ ಭಾರತವನ್ನು ಪ್ರತಿಬಿಂಬಿಸುತ್ತದೆ. ರಾಷ್ಟ್ರೀಯ ಹಿತಾಸಕ್ತಿಗಳನ್ನು ಕಾಪಾಡಿಕೊಳ್ಳಲು ಮತ್ತು ಪ್ರಮುಖ ಜಾಗತಿಕ ಶಕ್ತಿಯಾಗಿ ಹೊರಹೊಮ್ಮಲು ಭಾರತ ಸಿದ್ಧವಾಗಿದೆ ಎಂದು ರಕ್ಷಣಾ ಸಚಿವರು ಪ್ರತಿಪಾದಿಸಿದ್ದಾರೆ.

---

ಭಾರತ, ಪ್ರಮುಖ ವಿದ್ಯುನ್ಮಾನ ಉತ್ಪಾದನಾ ಕೇಂದ್ರವಾಗಿ ಹೊರಹೊಮ್ಮಿದ್ದು, ವಿಶ್ವದ ಆರನೇ ಅತಿದೊಡ್ಡ ವಿದ್ಯುನ್ಮಾನ ರಫ್ತು ರಾಷ್ಟ್ರವಾಗಿದೆ ಎಂದು ಕೇಂದ್ರ ವಿದ್ಯುನ್ಮಾನ ಮತ್ತು ಮಾಹಿತಿ ತಂತ್ರಜ್ಞಾನ ಸಚಿವ ಅಶ್ವಿನಿ ವೈಷ್ಣವ್ ಹೇಳಿದ್ದಾರೆ. ಅವರಿಂದು ಪುಣೆಯ ರಂಜನಗಾಂವ್ ಎಂಐಡಿಸಿಯಲ್ಲಿ ಅಮೆರಿಕ ಮೂಲದ ಜಾಬಿಲ್ ಕಂಪನಿಯ ಹೊಸ ಉತ್ಪಾದನಾ ಘಟಕವನ್ನು ಉದ್ಘಾಟಿಸಿ ಮಾತನಾಡಿದರು.

ಪ್ರಧಾನಮಂತ್ರಿ ನರೇಂದ್ರ ಮೋದಿ ಅವರ ನೇತೃತ್ವದಲ್ಲಿ ಭಾರತವು ಜಾಗತಿಕ ವಿದ್ಯುನ್ಮಾನ ಉತ್ಪಾದನಾ ತಾಣವಾಗಿ ರೂಪುಗೊಂಡಿದ್ದು, ವಿಶ್ವದ ವಿವಿಧ ಮಾರುಕಟ್ಟೆಗಳಿಗೆ ಉತ್ಪನ್ನಗಳನ್ನು ರಫ್ತು ಮಾಡುತ್ತಿದೆ. ಮುಂದಿನ ಕೆಲ ವರ್ಷಗಳಲ್ಲಿ ವಿಶ್ವದ ಎರಡನೇ ಅತಿದೊಡ್ಡ ವಿದ್ಯುನ್ಮಾನ ರಫ್ತುದಾರ ರಾಷ್ಟ್ರವಾಗುವ ಗುರಿಯನ್ನು ಹೊಂದಿದೆ ಎಂದು ತಿಳಿಸಿದರು.

ದೇಶದಲ್ಲಿ ಪ್ರಸ್ತುತ ಎರಡು ಸೆಮಿಕಂಡಕ್ಟರ್ ಘಟಕಗಳು ಅಭಿವೃದ್ಧಿ ಹಂತದಲ್ಲಿದ್ದು, ಈ ವರ್ಷದ ಅಂತ್ಯದ ವೇಳೆಗೆ ಅವುಗಳ ಸಂಖ್ಯೆ ನಾಲ್ಕಕ್ಕೆ ಏರಿಕೆಯಾಗಲಿದೆ.

---

ರಾಷ್ಟ್ರಪತಿ ದ್ರೌಪದಿ ಮುರ್ಮು ಅವರು ನಾಳೆಯಿಂದ ಐದು ದಿನ ಮಧ್ಯಪ್ರದೇಶ ಪ್ರವಾಸ ಆರಂಭಿಸಲಿದ್ದಾರೆ.

ಇಂದೋರ್‌ಗೆ ಆಗಮಿಸಿದ ಬಳಿಕ ಬೇತುಲ್‌ಗೆ ತೆರಳಲಿರುವ ರಾಷ್ಟ್ರಪತಿ ಅವರು, ಬ್ರಹ್ಮಕುಮಾರಿ ಸಂಸ್ಥೆ ಆಯೋಜಿಸಿರುವ ಕಾರ್ಯಕ್ರಮದಲ್ಲಿ ಭಾಗವಹಿಸಲಿದ್ದಾರೆ. ನಂತರ ಓಂಕಾರೇಶ್ವರ ದೇವಾಲಯಕ್ಕೆ ಭೇಟಿ ನೀಡಿ ಸಂಜೆ ಆರತಿಯಲ್ಲಿ ಪಾಲ್ಗೊಳ್ಳಲಿದ್ದಾರೆ.

೧೯ರಂದು ರಾಷ್ಟ್ರಪತಿ ಅವರು, ಅಂತಾರಾಷ್ಟ್ರೀಯ ರಕ್ತಹೀನತೆ ದಿನದ ಅಂಗವಾಗಿ ಆಯೋಜಿಸಿರುವ ಕಾರ್ಯಕ್ರಮದಲ್ಲಿ ಭಾಗವಹಿಸಲಿದ್ದು, ಬಳಿಕ ಪಶ್ಚಿಮ ಬಂಗಾಳದ ಕಲ್ಯೈಕುಂಡಾಗೆ ತೆರಳಲಿದ್ದಾರೆ. ಜೂನ್ ೨೦ರಂದು ಅವರು ಮತ್ತೆ ಮಧ್ಯಪ್ರದೇಶಕ್ಕೆ ಮರಳಲಿದ್ದು, ಸಂಜೆ ಜಬಲ್ಪುರ್‌ಗೆ ಆಗಮಿಸಲಿದ್ದಾರೆ.

ಜೂನ್ ೨೧ರಂದು ಜಬಲ್ಪುರ್‌ನಲ್ಲಿ ನಡೆಯಲಿರುವ ಅಂತಾರಾಷ್ಟ್ರೀಯ ಯೋಗ ದಿನಾಚರಣೆ ಕಾರ್ಯಕ್ರಮದಲ್ಲಿ ರಾಷ್ಟ್ರಪತಿ ಅವರು ಭಾಗವಹಿಸಲಿದ್ದಾರೆ. ನಂತರ ರಾಣಿ ದುರ್ಗಾವತಿ ವಿಶ್ವವಿದ್ಯಾಲಯದ ೩೬ನೇ ಘಟಿಕೋತ್ಸವ ಸಮಾರಂಭದಲ್ಲಿ ಮುಖ್ಯ ಅತಿಥಿಯಾಗಿ ಪಾಲ್ಗೊಳ್ಳಲಿದ್ದಾರೆ. ಬಳಿಕ ಅವರು ಕೂನೋ ರಾಷ್ಟ್ರೀಯ ಉದ್ಯಾನವನಕ್ಕೆ ಭೇಟಿ ನೀಡಲಿದ್ದು, ಜೂನ್ ೨೨ರಂದು ದೆಹಲಿಗೆ ಮರಳಲಿದ್ದಾರೆ.

---

ಕೇಂದ್ರ ಗ್ರಾಹಕ ವ್ಯವಹಾರಗಳು, ಆಹಾರ ಮತ್ತು ನಾಗರಿಕ ಸರಬರಾಜು ಸಚಿವ ಪ್ರಲ್ಹಾದ ಜೋಶಿ ಅವರು ದೆಹಲಿಯಲ್ಲಿ ನಾಳೆ ಆಹಾರ ಧಾನ್ಯಗಳ ಸಂಗ್ರಹಣೆಗಾಗಿ ರೂಪಿಸಲಾಗಿರುವ ಸ್ಮಾರ್ಟ್ ಉಗ್ರಾಣ ವ್ಯವಸ್ಥೆಯನ್ನು ಉದ್ಘಾಟಿಸಲಿದ್ದಾರೆ.

__________ ಮುಕ್ತಾಯ ___________